ಕರ್ನಾಟಕ ಸರ್ಕಾರ

# ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ,

ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ-562101

Email id: dhochikballapur@gmail.com Ph.No: 08156-277034

ಸಂಖ್ಯೆ: ಜಿಆಕುಕ/ಚಿಪುರ/ಆಕ್ಸಿಜನ್ ಪ್ಲಾಂಟ್/ಗುತ್ತಿಗೆ/01/2021-22 ದಿನಾಂಕ: 16.12.2021

## -:ಪ್ರಕಟಣೆ:-

ವಿಷಯ: ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ "ವೈದ್ಯಕೀಯ ಆಮ್ಲಜನಕ ವ್ಯವಸ್ಥೆ" ಯ ನಿರ್ವಹಣೆ ಮಾಡಲು ಟೆಕ್ನಿಷಿಯನ್‌ಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವ ಬಗ್ಗೆ.

ಉಲ್ಲೇಖ: ಮಾನ್ಯ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರ ಪತ್ರದ ಸಂಖ್ಯೆ: ಜೆಡಿಎಂ/ಐಸಿಯು/14/ಬಿಎಂಇ&ಟೆಕ್/2021-22, ದಿನಾಂಕ: 08.12.2021.

***&***

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ ವೈದ್ಯಕೀಯ ಆಮ್ಲಜನಕ ವ್ಯವಸ್ಥೆಯ ಉನ್ನತೀಕರಣದ ಪರಿಣಾಮವಾಗಿ ಎಲ್.ಎಂ.ಓ. ಟ್ಯಾಂಕ್‌ಗಳು, ಪಿಎಸ್.ಎ. ಸ್ಥಾವರಗಳು, ಆಮ್ಲಜನಕ ಸಿಲಿಂಡರ್‌ಗಳು, ಆಮ್ಲಜನಕದ ಸಾಂದ್ರೀಕರಣಗಳು, ವೈದ್ಯಕೀಯ ಗ್ಯಾಸ್ ಪೈಪ್‌ಲೈನ್ ವ್ಯವಸ್ಥೆಯೊಂದಿಗೆ ಆಮ್ಲಜನಕದ ನಿರ್ವಹಣೆ, ಮೇಲ್ವಿಚಾರಣೆಗಾಗಿ ಟೆಕ್ನಿಷಿಯನ್‌ಗಳನ್ನು ನೇಮಿಸಿಕೊಳ್ಳಲು ಸರ್ಕಾರವು ಆದೇಶಿಸಲಾಗಿರುತ್ತದೆ. ಅದರಂತೆ, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಜಿಲ್ಲಾ ಆಸ್ಪತ್ರೆ ಮತ್ತು ಸಾರ್ವಜನಿಕ ಆಸ್ಪತ್ರೆಗಳಿಗೆ ಟೆಕ್ನಿಷಿಯನ್ ಸಿಬ್ಬಂದಿಗಳನ್ನು ಮಾಸಿಕ ವೇತನ ಒಳಗೊಂಡಂತೆ ರೋಸ್ಟರ್ ಕಂ ಮೆರಿಟ್ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಈ ಕಛೇರಿಯಿಂದಲೇ ನೇರ ಸಂದರ್ಶನ ನಡೆಸಿ ದಾಖಲೆಗಳನ್ನು ಪರಿಶೀಲಿಸಿ ನೇಮಿಸಿಕೊಳ್ಳಲು ಸೂಚಿಸಲಾಗಿರುವ ಮೇರೆಗೆ ಗುತ್ತಿಗೆ ಆಧಾರದಲ್ಲಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. (www.chikkaballapur.nic.in) ರಲ್ಲಿ ದಿನಾಂಕ: 27.12.2021 ರಂದು ಸಂಜೆ 5.00 ಗಂಟೆ ಒಳಗೆ ಅರ್ಜಿಗಳನ್ನು ಸಲ್ಲಿಸುವಂತೆ ಸೂಚಿಸಿದೆ ಹಾಗೂ ದಿನಾಂಕ: 30.12.2021 ರಂದು ಬೆಳಗ್ಗೆ 11:00 ಗಂಟೆಗೆ ಎಲ್ಲಾ ಅರ್ಜಿದಾರರು ಮೂಲ ದಾಖಲೆಗಳೊಂದಿಗೆ ಪರಿಶೀಲನೆಗಾಗಿ ಈ ಕಛೇರಿಗೆ ಹಾಜರಾಗತಕ್ಕದ್ದು.

| ಕ್ರ.ಸಂ | ಹುದ್ದೆಯ ವಿವರ | ಮಾಸಿಕ ವೇತನ | ನೇಮಕ ಮಾಡಿಕೊಳ್ಳಬೇಕಾದ ಸಂಖ್ಯೆ |
|---|---|---|---|
| 1 | ಟೆಕ್ನಿಷಿಯನ್ | ರೂ. 15000/- | 13 |

ಷರತ್ತು ಮತ್ತು ನಿಬಂಧನೆಗಳು:-

1. ಉಲ್ಲೇಖಿತ ಆದೇಶದ ಪ್ರಕಾರ (ಪಟ್ಟಿಯಲ್ಲಿರುವಂತೆ) ಭಾರತ ಸರ್ಕಾರದ ಕೌಶಲ್ಯ ಅಭಿವೃದ್ಧಿ ಇಲಾಖೆಯಿಂದ ತರಬೇತಿಯನ್ನು ಪಡೆದವರಿಗೆ ಮೊದಲ ಆದ್ಯತೆ ನೀಡಲಾಗುವುದು.
2. ಆಸ್ಪತ್ರೆಯಲ್ಲಿ ಕನಿಷ್ಠ 2 ವರ್ಷಗಳ ಅನುಭವ ಅಥವಾ ವೈದ್ಯಕೀಯ ಉಪಕರಣಗಳು/ವೈದ್ಯಕೀಯ ಆಮ್ಲಜನಕ ಸೇವೆಯಲ್ಲಿ ಅನುಭವ ಹೊಂದಿರಬೇಕು.
3. ವೈದ್ಯಕೀಯ ಆಮ್ಲಜನಕ ಸ್ಥಾವರಗಳ ದುರಸ್ಥಿ, ನಿರ್ವಹಣೆ ಮತ್ತು ತೊಂದರೆ ನಿರ್ವಹಣೆ ನೋಡಿಕೊಳ್ಳುವುದು.
4. ಆಸ್ಪತ್ರೆಯ ಸಿಬ್ಬಂದಿಗೆ ವೈದ್ಯಕೀಯ ಆಮ್ಲಜನಕ ವ್ಯವಸ್ಥೆ ಕುರಿತು ತಾಂತ್ರಿಕ ತರಬೇತಿಯಲ್ಲಿ ಉತ್ತೀರ್ಣರಾದಲ್ಲಿ ನೇಮಿಸಿಕೊಳ್ಳಲಾಗುವುದು.
5. ಸಲಕರಣೆಗಳ ನಿರ್ವಹಣೆಗಾಗಿ ಸೇವಾ ಸಂಸ್ಥೆಯೊಂದಿಗೆ ಸಮನ್ವಯಗೊಳಿಸಿ, ಆಸ್ಪತ್ರೆ ಅಧಿಕಾರಿಗಳಿಗೆ ತಾಂತ್ರಿಕ ನೆರವು ನೀಡುವುದು.

ಹುದ್ದೆಯ ವಿವರ:-

1. ಟೆಕ್ನಿಷಿಯನ್:-

   ವಿದ್ಯಾರ್ಹತೆ: ಡಿಪ್ಲೋಮಾ/ಐಟಿಐ ಬಯೋ-ಮೆಡಿಕಲ್/ಎಲೆಕ್ಟ್ರಿಕಲ್/ಎಲೆಕ್ಟ್ರಾನಿಕ್ಸ್/ಇನ್ಸ್ಟ್ರುಮೆಂಟೇಶನ್/ಮೆಕ್ಯಾನಿಕಲ್ ಕೋರ್ಸ್‌ನಲ್ಲಿ ತೇರ್ಗಡೆ ಹೊಂದಿರಬೇಕು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ
ಕಲ್ಯಾಣಾಧಿಕಾರಿಗಳು, ಚಿಕ್ಕಬಳ್ಳಾಪುರ

ಪ್ರತಿಯನ್ನು:

1. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಚಿಕ್ಕಬಳ್ಳಾಪುರ ರವರಿಗೆ ಸಲ್ಲಿಸುತ್ತಾ ಸದರಿ ಪ್ರಕಟಣೆಯನ್ನು ಸಾಧ್ಯವಾದಷ್ಟು ಕಡಿಮೆ ಅಳತೆಯಲ್ಲಿ ಪ್ರಚುರ ಪಡಿಸಲು ತಿಳಿಸಿದೆ.